**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.08.2026 9.50 a.m.**

**<><><><>**

ಮುಖ್ಯಾಂಶಗಳು

1. ರಾಷ್ಟ್ರಾದ್ಯಂತ ಇಂದು ೮೦ನೇ ಸ್ವಾತಂತ್ರ್ಯ ದಿನಾಚರಣೆ ಸಂಭ್ರಮ; ಎಲ್ಲೆಡೆ ಮೊಳಗಿದ ದೇಶಭಕ್ತಿ
2. ಕೆಂಪುಕೋಟೆಯಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ಪ್ರಧಾನಿ ನರೇಂದ್ರ ಮೋದಿ
3. ರಾಷ್ಟ್ರೀಯ ಹಿತಾಸಕ್ತಿಯು ಭಾರತದ ವಿದೇಶಾಂಗ ನೀತಿಯ ಅಡಿಪಾಯ - ರಾಷ್ಟ್ರಪತಿ ದ್ರೌಪದಿ ಮುರ್ಮು
4. ಇಂದಿನಿಂದ ಭಾರತ-ಶ್ರೀಲಂಕಾ ಟೆಸ್ಟ್ ಪಂದ್ಯ; ಐತಿಹಾಸಿಕ ೬೦೦ನೇ ಟೆಸ್ಟ್ ಸಂಭ್ರಮದಲ್ಲಿ ಭಾರತ

<><><><>

ರಾಷ್ಟ್ರಾದ್ಯಂತ ಇಂದು ೮೦ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ದೆಹಲಿಯ ಐತಿಹಾಸಿಕ ಕೆಂಪುಕೋಟೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಭಾರತೀಯ ವಾಯುಪಡೆಯ ಎರಡು ಎಂಐ-೧೭ ಹೆಲಿಕಾಪ್ಟರ್‌ಗಳು ಪುಷ್ಪವೃಷ್ಟಿ ಮಾಡಿದವು. ೨೧ ಕುಶಲತೋಪುಗಳ ಗೌರವ ವಂದನೆ ಸಲ್ಲಿಸಲಾಯಿತು. ಬಳಿಕ ದೇಶವನ್ನುದ್ದೇಶಿಸಿ ಭಾಷಣ ಮಾಡಿದ ಪ್ರಧಾನಿ ನರೇಂದ್ರ ಮೋದಿ ಅವರು, ಸ್ವಾತಂತ್ರ್ಯದ ನಂತರ ಮೊದಲ ಬಾರಿಗೆ ಕೆಂಪು ಕೋಟೆಯಿಂದ ವಂದೇ ಮಾತರಂ ಪ್ರತಿಧ್ವನಿಸುತ್ತಿದೆ ಎಂದು ಹೇಳಿದರು. ಇತ್ತೀಚಿನ ದಿನಗಳಲ್ಲಿ, ದೇಶದ ಕೆಲವು ಭಾಗಗಳು ತೀವ್ರ ಪ್ರವಾಹ ಮತ್ತು ಭೂಕುಸಿತಗಳನ್ನು ಕಂಡಿದ್ದು, ಅನೇಕ ಕುಟುಂಬಗಳ ಮೇಲೆ ಪರಿಣಾಮ ಬೀರಿವೆ. ಇಡೀ ರಾಷ್ಟ್ರವು ಅವರ ಜೊತೆ ದೃಢವಾಗಿ ನಿಲ್ಲುತ್ತದೆ ಎಂದರು. ಒಂದು ರಾಷ್ಟ್ರವು ತನ್ನ ದೃಢನಿಶ್ಚಯ ಮತ್ತು ಸಾಮರ್ಥ್ಯಗಳ ಬಲದ ಮೇಲೆ ಮುಂದುವರಿಯುವಾಗ ಅದು ಶ್ರೇಷ್ಠವಾಗುತ್ತದೆ. ಕಳೆದ ಹನ್ನೆರಡು ವರ್ಷಗಳಲ್ಲಿ, ದೇಶದ ಕೋಟ್ಯಂತರ ನಾಗರಿಕರು ತಮ್ಮ ದೃಢನಿಶ್ಚಯ ಮತ್ತು ಸಮರ್ಪಣಾ ಮನೋಭಾವದಿಂದ ದೇಶವನ್ನು ಹೊಸ ಎತ್ತರಕ್ಕೆ

ಕೊಂಡೊಯ್ಯಲು ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡಿದ್ದಾರೆ. ಈ ಪ್ರಯತ್ನಗಳಿಂದಾಗಿ ೨೫ ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಒಂದು ಕಾಲದಲ್ಲಿ ದುರ್ಬಲ ಐದು ಆರ್ಥಿಕತೆಗಳಲ್ಲಿ ಒಂದಾಗಿದ್ದ ಭಾರತ, ಈಗ ವಿಶ್ವದ ಪ್ರಮುಖ ಮತ್ತು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿ ಹೊರಹೊಮ್ಮಿದ. ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವುದು ಭಾರತದ ದೊಡ್ಡ ಗುರಿಯಾಗಿದೆ ಎಂದು ಹೇಳಿದರು.

ಧ್ವನಿ : ನರೇಂದ್ರ ಮೋದಿ (೧೮ ಸೆಕೆಂಡ್‌ಗಳು)

ಕಳೆದ ೧೨ ವರ್ಷಗಳಲ್ಲಿ, ರಕ್ಷಣಾ ಉತ್ಪಾದನೆಯು ಸುಮಾರು ನಾಲ್ಕು ಪಟ್ಟು, ಖಾದಿ ಮತ್ತು ಗ್ರಾಮೋದ್ಯೋಗ ಉತ್ಪಾದನೆಯು ಸುಮಾರು ಐದು ಪಟ್ಟು, ಎಲೆಕ್ಟ್ರಾನಿಕ್ ಉತ್ಪಾದನೆಯು ಸುಮಾರು ಏಳು ಪಟ್ಟು, ಆಧುನಿಕ ರೈಲ್ವೆ ಕೋಚ್ ಉತ್ಪಾದನೆಯು ೨೧ ಪಟ್ಟು ಮತ್ತು ಮೊಬೈಲ್ ಫೋನ್ ಉತ್ಪಾದನೆಯು ೩೩ ಪಟ್ಟು ಹೆಚ್ಚಾಗಿದೆ ಎಂದು ಅವರು ತಿಳಿಸಿದರು. ಇಂಟರ್ನೆಟ್ ಬಳಕೆದಾರರು ಸುಮಾರು ನಾಲ್ಕು ಪಟ್ಟು ಮತ್ತು ಡಿಜಿಟಲ್ ವಹಿವಾಟುಗಳು ೧೦೦ ಪಟ್ಟು ಹೆಚ್ಚಾಗಿದೆ. ಕೇಂದ್ರ ಸರ್ಕಾರ, ಸಾಮಾನ್ಯ ಜನರ ಕಲ್ಯಾಣದ ಕಡೆಗೆ ಕೆಲಸ ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ರಾಷ್ಟ್ರೀಯ ಗೀತೆ ವಂದೇ ಮಾತರಂನ ೧೫೦ ವರ್ಷಗಳ ಪರಂಪರೆಯನ್ನು ಸ್ಮರಿಸುವುದು ಹಾಗೂ ೨೦೪೭ರ ವಿಕಸಿತ ಭಾರತದ ಪಯಣದಲ್ಲಿ ಯುವಶಕ್ತಿಯ ಕೊಡುಗೆಯನ್ನು ಬಿಂಬಿಸುವುದು ಈ ಬಾರಿಯ ಆಚರಣೆಯ ವಿಶೇಷತೆಯಾಗಿದೆ. ಇದೇ ಮೊದಲ ಬಾರಿಗೆ ಕೆಂಪುಕೋಟೆಯ ಸ್ವಾತಂತ್ರ್ಯ ದಿನಾಚರಣೆಯಲ್ಲಿ ವಂದೇ ಮಾತರಂ ಗಾಯನ ಮಾಡಲಾಯಿತು. ಎನ್‌ಸಿಸಿ ಹಾಗೂ ಮೈ ಭಾರತ್ ಸ್ವಯಂಸೇವಕರು ವಂದೇ ಮಾತರಂ ಗೀತೆ ಹಾಡಿದರು. ಭಾರತೀಯ ಸೇನೆ, ನೌಕಾಪಡೆ ಮತ್ತು ವಾಯುಪಡೆಯ ೨ ಸಾವಿರದ ೫೦೦ ಕೆಡೆಟ್‌ಗಳು ಹಾಗೂ ಮೈ ಭಾರತ್ ಸ್ವಯಂಸೇವಕರು ಸಮಾರಂಭದಲ್ಲಿ ಭಾಗವಹಿಸಿದ್ದರು. ವಿಶ್ವಕರ್ಮ ಯೋಜನೆಯ ಕುಶಲಕರ್ಮಿಗಳು, ಮುದ್ರಾ ಯೋಜನೆಯ ಮಹಿಳಾ ಉದ್ಯಮಿಗಳು, ಪಿಎಂ ಸ್ವನಿಧಿ ಯೋಜನೆಯ ಬೀದಿಬದಿ ವ್ಯಾಪಾರಿಗಳು ಹಾಗೂ ಭಾರತ್ ಟ್ಯಾಕ್ಸಿಯ ಚಾಲಕರು ಸೇರಿದಂತೆ ವಿವಿಧ ಕ್ಷೇತ್ರಗಳ ಸುಮಾರು ೫ ಸಾವಿರ ಮಂದಿ ವಿಶೇಷ ಅತಿಥಿಗಳಾಗಿ ಪಾಲ್ಗೊಂಡಿದ್ದರು.

<><><><>

೮೦ನೇ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ಆಕಾಶವಾಣಿ ಬೆಂಗಳೂರು ಕೇಂದ್ರದ ಮುಖ್ಯ ವಾಹಿನಿಯಿಂದ ಇಂದು ಬೆಳಗ್ಗೆ ೧೦ ಗಂಟೆ ೩೦ ನಿಮಿಷದಿಂದ ೧೧ ಗಂಟೆ ೩೦ ನಿಮಿಷದವರೆಗೆ 'ಫ್ರೀಡಂ ರಿದಮ್ ಎ ಸಿಂಫೊನಿ ಆಫ್ ಫ್ರೀಡಂ' ಕುರಿತ ಸಂಗೀತ ಕಾರ್ಯಕ್ರಮ ನೇರ ಪ್ರಸಾರವಾಗಲಿದೆ.

<><><>

ವಿಶ್ವದ ಹಲವಾರು ಭಾಗಗಳಲ್ಲಿ ಯುದ್ಧ ಮತ್ತು ಅಸ್ಥಿರತೆ ಇದ್ದರೂ ಭಾರತದ ಆರ್ಥಿಕತೆ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಮುಂದುವರಿಯುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ೮೦ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾದಿನದಂದು ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಆರ್ಥಿಕ ಮುನ್ಸೂಚನೆಗಳ ಪ್ರಕಾರ, ಭಾರತದ ಆರ್ಥಿಕತೆಯ ಬೆಳವಣಿಗೆಯ ದರವು ಸರಾಸರಿ ಜಾಗತಿಕ ಬೆಳವಣಿಗೆಯ ದರಕ್ಕಿಂತ ಎರಡು ಪಟ್ಟು ಹೆಚ್ಚಾಗುವ ನಿರೀಕ್ಷೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. 'ಆತ್ಮನಿರ್ಭರ ಭಾರತ' ಅಭಿಯಾನ ದೇಶದ ಆರ್ಥಿಕ ಪ್ರಗತಿ ಮತ್ತು ರಾಷ್ಟ್ರೀಯ ಭದ್ರತೆಯ ಅಡಿಪಾಯವನ್ನು ಮತ್ತಷ್ಟು ಬಲಪಡಿಸಿದೆ. ಭಾರತವು ೨೦೩೦ ರ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಕೆಲವನ್ನು ನಿಗದಿತ ಸಮಯಕ್ಕಿಂತ ಮೊದಲೇ ಸಾಧಿಸಿದೆ ಎಂದು ಅವರು ತಿಳಿಸಿದ್ದಾರೆ. ರಾಷ್ಟ್ರೀಯ ಹಿತಾಸಕ್ತಿಯು ಭಾರತದ ವಿದೇಶಾಂಗ ನೀತಿಯ ಅಡಿಪಾಯವಾಗಿದ್ದು, ಶಾಂತಿ, ಸಹಕಾರ, ಸಂವಾದ ಮತ್ತು ವಸುಧೈವ ಕುಟುಂಬಕಂನ ಆದರ್ಶವು ವಿದೇಶಾಂಗ ನೀತಿಯ ಆಧಾರಸ್ತಂಭಗಳಾಗಿವೆ ಎಂದು ಪುನುರುಚ್ಚರಿಸಿದ್ದಾರೆ. ಆರ್ಥಿಕ ಸಹಕಾರವನ್ನು ಹೆಚ್ಚಿಸಲು ಮತ್ತು ಪರಸ್ಪರ ಸಂಬಂಧಗಳನ್ನು ಬಲಪಡಿಸಲು ಭಾರತ, ಅನೇಕ ದೇಶಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಮಾಡಿಕೊಂಡಿದೆ. ಜಾಗತಿಕ ದಕ್ಷಿಣದ ದೇಶಗಳಲ್ಲಿ ಭಾರತವು ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

<><><>

ಭಾರತೀಯ ಸೇನೆಗೆ ಲೊಯಿಟರ್ ಮ್ಯುನಿಷನ್ ಸಿಸ್ಟಮ್‌ಗಳ ಖರೀದಿಗಾಗಿ ರಕ್ಷಣಾ ಸಚಿವಾಲಯ, ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ಸ್ ಲಿಮಿಟೆಡ್ ಮತ್ತು ಎನ್‌ಐಬಿಇ ಪ್ರೈವೇಟ್ ಲಿಮಿಟೆಡ್‌ನೊಂದಿಗೆ ಒಂದು ಸಾವಿರದ ೫೭೭ ಕೋಟಿ ರೂಪಾಯಿಗಳ ಒಪ್ಪಂದಗಳಿಗೆ ಸಹಿ ಹಾಕಿದೆ. ಲೊಯಿಟರ್ ಮ್ಯುನಿಷನ್ ಸಿಸ್ಟಮ್, ಆರ್ಟಿಲರಿ ರೆಜಿಮೆಂಟ್‌ಗಳ ಸಾಮರ್ಥ್ಯ ಹೆಚ್ಚಿಸಲು ಅಭಿವೃದ್ಧಿಪಡಿಸಲಾದ ನಿರ್ಣಾಯಕ

ಸಾಧನವಾಗಿದ್ದು, ಇದರಿಂದಾಗಿ ಭಾರತೀಯ ಸೇನೆಯ ಒಟ್ಟಾರೆ ಕಾರ್ಯಾಚರಣೆಯ ಪರಿಣಾಮಕಾರಿತ್ವವನ್ನು ಬಲಪಡಿಸುತ್ತದೆ. ಈ ಖರೀದಿಯು ಭಾರತೀಯ ರಕ್ಷಣಾ ಕೈಗಾರಿಕೆಗಳನ್ನು ಆಧುನೀಕರಿಸುವ ಮತ್ತು ಸಬಲೀಕರಣಗೊಳಿಸುವತ್ತ ಒಂದು ಪ್ರಮುಖ ಮೈಲುಗಲ್ಲಾಗಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

<><><>

ದೂರದರ್ಶನ ಚಾನೆಲ್‌ಗಳಿಗೆ ೧೨ ನಿಮಿಷಗಳ ಜಾಹೀರಾತು ಅವಧಿಯ ಮಿತಿಯನ್ನು ತೆಗೆದುಹಾಕಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಟಿವಿ ಪ್ರಸಾರ ವಲಯದಲ್ಲಿ ಆದ ಬದಲಾವಣೆಗಳನ್ನು ಗಮನದಲ್ಲಿಟ್ಟುಕೊಂಡು, ಜಾಹೀರಾತು ಅವಧಿಗೆ ಸಂಬಂಧಿಸಿದ ನಿಬಂಧನೆಗಳನ್ನು ಮರುಪರಿಶೀಲಿಸಲು ನಿರ್ಧರಿಸಲಾಗಿದೆ. ಭಾರತದಲ್ಲಿ, ಟಿವಿ ಚಾನೆಲ್‌ಗಳು 'ಪಾವತಿ' ಅಥವಾ 'ಪ್ರಸಾರ ಮುಕ್ತ' ಎಂಬುದನ್ನು ಲೆಕ್ಕಿಸದೆ, ಈ ವಲಯವು ಜಾಹೀರಾತಿನ ಮೇಲೆ ಹೆಚ್ಚು ಅವಲಂಬಿತವಾಗಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ. ೨೦೦೫ರಲ್ಲಿ ದೂರದರ್ಶನಕ್ಕಾಗಿ ಜಾಹೀರಾತು ಅವಧಿಯ ಮಿತಿಯನ್ನು ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ನಿಯಮಗಳು-೧೯೯೪ ರ ಅಡಿಯಲ್ಲಿ ಪರಿಚಯಿಸಲಾಯಿತು.

<><><>

ಯುಜಿಸಿ-ಎನ್‌ಇಟಿ, ಸಿಎಸ್‌ಐಆರ್-ಎನ್‌ಇಟಿ, ಐಸಿಎಆರ್ ಎಐಇಇಎ ಪಿಜಿ, ಎಐಸಿಇ ಪಿಹೆಚ್‌ಡಿ ೨೦೨೫ ರ ತಾತ್ಕಾಲಿಕ ಉತ್ತರ ಕೀಗಳನ್ನು ನಾಳೆ ಪ್ರಕಟಿಸಲಾಗುವುದು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ- ಎನ್‌ಟಿಎ ಘೋಷಿಸಿದೆ.

<><><>

ಭಾರತ ಮತ್ತು ಶ್ರೀಲಂಕಾ ನಡುವಿನ ಎರಡು ಪಂದ್ಯಗಳ ಸರಣಿಯ ಮೊದಲ ಟೆಸ್ಟ್ ಪಂದ್ಯ ಇಂದು ಶ್ರೀಲಂಕಾದ ಗಾಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಆರಂಭವಾಗಲಿದೆ. ಪಂದ್ಯವು ಭಾರತೀಯ ಕಾಲಮಾನ ಬೆಳಗ್ಗೆ ೧೦ ಗಂಟೆಗೆ ಆರಂಭವಾಗಲಿದೆ. ಭಾರತದ ೮೦ ನೇ ಸ್ವಾತಂತ್ರ್ಯ ದಿನದಂದು, ಭಾರತೀಯ ಪುರುಷರ ತಂಡವು ಇಂದು ಐತಿಹಾಸಿಕ ೫೦೦ ನೇ ಟೆಸ್ಟ್ ಪಂದ್ಯವನ್ನು ಆಡಲಿದೆ. ಇಂಗ್ಲೆಂಡ್ ಮತ್ತು ಆಸ್ಟ್ರೇಲಿಯಾ ನಂತರ ಆ ಮೈಲಿಗಲ್ಲನ್ನು ತಲುಪಿದ ಮೂರನೇ ತಂಡವಾಗಿದೆ.

<><><>

ನವದೆಹಲಿಯ ರಾಷ್ಟ್ರಪತಿ ಭವನದ ಆವರಣದಲ್ಲಿರುವ ಅಮೃತ ಉದ್ಯಾನವು ನಾಳೆಯಿಂದ ಮುಂದಿನ ತಿಂಗಳ ೧೫ರವರೆಗೆ ಸಾರ್ವಜನಿಕರಿಗೆ ತೆರೆದಿರುತ್ತದೆ.  ಉದ್ಯಾನವು ಬೆಳಗ್ಗೆ ೧೦ ರಿಂದ ಸಂಜೆ ೬ರವರೆಗೆ ತೆರೆದಿರುತ್ತದೆ. ನಿರ್ವಹಣೆಗಾಗಿ ಉದ್ಯಾನವು ಎಲ್ಲಾ ಸೋಮವಾರಗಳಂದು ಮುಚ್ಚಲ್ಪಡುತ್ತದೆ. ಉದ್ಯಾನಕ್ಕೆ ಎಲ್ಲರಿಗೂ ಪ್ರವೇಶ ಉಚಿತವಾಗಿದೆ. ಸಂದರ್ಶಕರು ತಮ್ಮ ಸ್ಲಾಟ್‌ಗಳನ್ನು visit.rashtrapatibhavan.gov.in. ಮೂಲಕ ಆನ್‌ಲೈನಲ್ ನಲ್ಲಿ ನೋಂದಾಯಿಸಬಹುದು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>